# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 227 (192) |
| 2 | ಸದಸ್ಯರ ಹೆಸರು | : ಶ್ರೀ ಮುನಿರಾಜುಗೌಡ ಎಂ.ಪಿ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : 06.07.2023 |
| 4 | ಉತ್ತರಿಸುವ ಸಚಿವರು | : ಯೋಜನೆ, ಕಾರ್ಯಕ್ರಮ ಸಂಯೋಜನೆ<br>ಮತ್ತು ಸಾಂಖ್ಯಿಕ ಇಲಾಖಾ ಸಚಿವರು. |

*****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಿಂದಿನ ಸರ್ಕಾರ ಅನುಮೋದನೆ ನೀಡಿ ಪ್ರಾರಂಭವಾಗದೇ ಇರುವ ಎಲ್ಲಾ ಕಾಮಗಾರಿಗಳನ್ನು ತಡೆ ಹಿಡಿಯುವಂತೆ ರಾಜ್ಯ ಸರ್ಕಾರ ಆದೇಶಿಸಿದೆಯೇ: ಆದೇಶದ ಪ್ರತಿಯನ್ನು ನೀಡುವುದು: | ಹೌದು<br>ಹಿಂದಿನ ಸರ್ಕಾರ ಅನುಮೋದನೆ ನೀಡಿ, ಪ್ರಾರಂಭವಾಗದೇ ಇರುವ ಎಲ್ಲಾ ಕಾಮಗಾರಿಗಳನ್ನು ತಡೆ ಹಿಡಿಯುವಂತೆ ಆರ್ಥಿಕ ಇಲಾಖೆಯಿಂದ ಹೊರಡಿಸಲಾಗಿರುವ ಸುತ್ತೋಲೆ ಪ್ರತಿಯನ್ನು ನೀಡಲಾಗಿದೆ. |
| (ಆ) | ಸರ್ಕಾರದ ಈ ಆದೇಶವು ವಿಧಾನ ಪರಿಷತ್ತಿನ ಶಾಸಕರ ಪ್ರದೇಶಾಭಿವೃದ್ಧಿ ನಿಧಿಗೂ ಅನ್ವಯವಾಗುತ್ತದೆಯೇ:<br>ಅನ್ವಯವಾಗುವಂತಿದ್ದಲ್ಲಿ ಸರ್ಕಾರದ ಸದರಿ ಆದೇಶ ಶಾಸಕರ ಅಧಿಕಾರವನ್ನು ಮೊಟಕುಗೊಳಿಸುವಂತೆ ಆಗುವುದಿಲ್ಲವೇ: | ಆರ್ಥಿಕ ಇಲಾಖೆಯ ಸುತ್ತೋಲೆಯಲ್ಲಿ ವಿಧಾನ ಪರಿಷತ್ತಿನ ಶಾಸಕರ ಪ್ರದೇಶಾಭಿವೃದ್ಧಿ ನಿಧಿಗೆ ಅನ್ವಯವಾಗುತ್ತದೆ ಎಂದು ತಿಳಿಸಿರುವುದಿಲ್ಲ. |
| (ಇ) | ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಯೋಜನೆಯಲ್ಲಿ ನೀಡಿದ ಪ್ರಸ್ತಾವನೆಗಳನ್ನು ಸಹ ಕಾರ್ಯಾದೇಶ ನೀಡದೆ ಬಾಕಿಯಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ವಿಧಾನ ಪರಿಷತ್ತಿನ ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಯೋಜನೆ ಕಾಮಗಾರಿಗಳಿಗೆ ಕಾರ್ಯಾದೇಶ ನೀಡುವಂತೆ ಆದೇಶಿಸಲು ಸರ್ಕಾರ ಕೈಗೊಂಡ ಕ್ರಮವೇನು: | ಹೌದು ಬಂದಿದೆ.<br>ಆರ್ಥಿಕ ಇಲಾಖೆಯಿಂದ ಹೊರಡಿಸಲಾಗಿರುವ ಸುತ್ತೋಲೆಯಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಬಗ್ಗೆ ಉಲ್ಲೇಖವಿಲ್ಲದಿರುವ ಹಿನ್ನಲೆಯಲ್ಲಿ, ಸದರಿ ಪ್ರಸ್ತಾವನೆಯ ಕುರಿತು ಆರ್ಥಿಕ ಇಲಾಖೆಯನ್ನು ಸ್ಪಷ್ಟೀಕರಣ ಕೋರಲಾಗಿತ್ತು. ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆಯಂತೆ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನವನ್ನು ಬಿಡುಗಡೆಗೊಳಿಸಲು ಅನುಮತಿ ನೀಡಿರುವ ಅಂಶವನ್ನು ಪತ್ರದ ಮುಖೇನ ಎಲ್ಲಾ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿಗಳಿಗೆ ತಿಳಿಸಲಾಗಿದೆ. ಪ್ರತಿಯನ್ನು ಅನುಬಂಧ-1 ರಲ್ಲಿ ನೀಡಲಾಗಿದೆ. |
| (ಈ) | ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಕಳೆದ 2 ತಿಂಗಳುಗಳಲ್ಲಿ ವಿಧಾನ ಪರಿಷತ್ತಿನ ಶಾಸಕರುಗಳು ನೀಡಿದ ಕಾಮಗಾರಿಯ ಪ್ರಸ್ತಾವನೆಗಳು ಮತ್ತು ಜಿಲ್ಲಾಧಿಕಾರಿಗಳು ನೀಡಿದ ಕಾರ್ಯಾದೇಶಗಳು ಯಾವುವು ? (ಸಂಪೂರ್ಣ ವಿವರ ನೀಡುವುದು) | ಕಳೆದ 2 ತಿಂಗಳುಗಳಲ್ಲಿ ವಿಧಾನ ಪರಿಷತ್ತಿನ ಶಾಸಕರುಗಳು ನೀಡಿದ ಕಾಮಗಾರಿಯ ಪ್ರಸ್ತಾವನೆಗಳ ವಿವರಗಳು ಕೆಳಕಂಡಂತಿದೆ:<br>(ಕ್ರ ಸಂ / ಜಿಲ್ಲೆ / ಪ್ರಸ್ತಾವನೆ ಸ್ವೀಕೃತಗೊಂಡಿರುವ ವಿವರ)<br>1 / ಬೆಂಗಳೂರು ನಗರ / 13<br>2 / ಬೆಂಗಳೂರು ಗ್ರಾಮಾಂತರ / -<br>ಸ್ವೀಕೃತ ಪ್ರಸ್ತಾವನೆಗಳನ್ನು ಅನುಬಂಧ-2 ದಲ್ಲಿ ನೀಡಲಾಗಿದೆ. |

ಸಂಖ್ಯೆ: ಪಿಡಿಎಸ್ 31 ಕೆಎಲ್ಎಸ್ 2023

(ಡಿ .ಸುಧಾಕರ್)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖಾ ಸಚಿವರು.

## ಕರ್ನಾಟಕ ಸರ್ಕಾರ

ಸಂಖ್ಯೆ:ಆಇ 1 ಟಿಎಫ್‌ಪಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ

ಬೆಂಗಳೂರು.ದಿನಾಂಕ: 22.05.2023

## ಸುತ್ತೋಲೆ

ವಿಷಯ:- ಸರ್ಕಾರದ ಎಲ್ಲಾ ಇಲಾಖೆಗಳು/ನಿಗಮಗಳು/ಮಂಡಳಿ/ಪ್ರಾಧಿಕಾರಗಳ ಹಿಂದಿನ ಕಾಮಗಾರಿಗಳನ್ನು ತಡೆಹಿಡಿಯುವ ಬಗ್ಗೆ.

ಉಲ್ಲೇಖ:- ಮಾನ್ಯ ಮುಖ್ಯಮಂತ್ರಿಗಳ ಟಿಪ್ಪಣಿ ಸಂ.ಮುಮಂ/08/2023, ದಿನಾಂಕ 22.05.2023.

*******

ಮಾನ್ಯ ಮುಖ್ಯಮಂತ್ರಿಗಳ ನಿರ್ದೇಶನದಂತೆ, ಈ ಹಿಂದಿನ ಸರ್ಕಾರ ಕೈಗೊಂಡಿದ್ದ ಎಲ್ಲಾ ಇಲಾಖೆಗಳ ಹಾಗೂ ಇಲಾಖೆಗಳ ಅಧೀನಕ್ಕೊಳಪಡುವ ನಿಗಮ/ಮಂಡಳಿ/ಪ್ರಾಧಿಕಾರಗಳ <u>ಕಾಮಗಾರಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಮುಂದಿನ ಹಣ ಬಿಡುಗಡೆ/ಪಾವತಿಗಳನ್ನು</u> ತಕ್ಷಣದಿಂದ ಜಾರಿಗೆ ಬರುವಂತೆ ತಡೆ ಹಿಡಿಯಲು ಹಾಗೂ ಪ್ರಾರಂಭವಾಗದಿರುವ ಎಲ್ಲಾ ಕಾಮಗಾರಿಗಳನ್ನು ಸಹ ತಡೆ ಹಿಡಿಯಲು ತಿಳಿಸಲಾಗಿದೆ.

22/5

(ಡಾ:ಏಕ್‌ರೂಪ್ ಕೌರ್)
ಸರ್ಕಾರದ ಕಾರ್ಯದರ್ಶಿ (ಆ ಮತ್ತು ಸಂ)
ಆರ್ಥಿಕ ಇಲಾಖೆ

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ/ಕಾರ್ಯದರ್ಶಿಗಳು.
2. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆ.ಪಿ.ಸಿ.ಎಲ್, ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಛೇರಿ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು-1.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
4. ರಾಜ್ಯದ ಎಲ್ಲಾ ನಿಗಮ/ಮಂಡಳಿ/ಪ್ರಾಧಿಕಾರಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
6. ಆರ್ಥಿಕ ಇಲಾಖೆಯ ಅಪರ/ಜಂಟಿ/ಉಪ ಕಾರ್ಯದರ್ಶಿಗಳು
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಅನುಬಂಧ - 1

ಕರ್ನಾಟಕ ಸರ್ಕಾರ

ಸಂಖ್ಯೆ:ಪಿಡಿಎಸ್/25/ಕೆಎಲ್ಎಸ್/2023

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:03.07.2023.

ಇವರಿಂದ,
ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ,
ಬೆಂಗಳೂರು.

ಇವರಿಗೆ,
ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಅಪರ ಜಿಲ್ಲಾಧಿಕಾರಿಗಳು
ಹಾಗೂ ಸಂಬಂಧಪಟ್ಟ ಉಪವಿಭಾಗಾಧಿಕಾರಿಗಳಿಗೆ.

ಮಾನ್ಯರೇ,

**ವಿಷಯ:-** ಕೆಲ್ಯಾಡ್ಸ್ ಯೋಜನೆಯಡಿ ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಸ್ಪಷ್ಟೀಕರಿಸುವ ಬಗ್ಗೆ.

**ಉಲ್ಲೇಖ:-** 1. ತಮ್ಮ ಪತ್ರ ಸಂಖ್ಯೆ:ಕೆ.ಎಲ್.ಎಲ್.ಎ.ಡಿ.ಎಸ್/ಯೋಜನಾ ಇಲಾಖೆ /ಸಿಆರ್/01/2023-24 ದಿನಾಂಕ:23.05.2023.
2. ಆರ್ಥಿಕ ಇಲಾಖೆ ಸುತ್ತೋಲೆ ಸಂಖ್ಯೆ:ಆಇ 1 ಟಿಎಫ್‌ಪಿ 2023, ದಿನಾಂಕ:28.06.2023.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ-1ರ ಪತ್ರದಲ್ಲಿ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಾನ್ಯ ಹಿಂದಿನ ಶಾಸಕರು ಪ್ರಸ್ತಾವನೆ ಸಲ್ಲಿಸಿರುವ ಕೆಲವು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಹಂತದಲ್ಲಿ ಕರ್ನಾಟಕ ವಿಧಾನಸಭಾ ಚುನಾವಣಾ ದಿನಾಂಕ ಘೋಷಣೆಯಾದ ಪ್ರಯುಕ್ತ ಕೆಲವು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿರುವುದಿಲ್ಲ ಹಾಗೂ ಎಲ್ಲಾ ಅಧಿಕಾರಿಗಳು ಚುನಾವಣಾ ಕಾರ್ಯದಲ್ಲಿ ನಿರತರಾಗಿದ್ದ ಕಾರಣ ಪೂರ್ಣಗೊಂಡಿರುವ ಕೆಲವು ಕಾಮಗಾರಿಗಳಿಗೆ ಅಂತಿಮ ಬಿಲ್ ಸಹ ಬಿಡುಗಡೆ ಮಾಡುವ ಹಂತದಲ್ಲಿಯೇ ಉಳಿದಿರುತ್ತವೆ. ಆದ್ದರಿಂದ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಈ ಹಿಂದಿನ ಶಾಸಕರು ಪ್ರಸ್ತಾವನೆ ಸಲ್ಲಿಸಿರುವ ಕಾಮಗಾರಿಗಳಿಗೆ ಅನುಮೋದನೆ ನೀಡುವ ಬಗ್ಗೆ ಸೂಕ್ತ ನಿರ್ದೇಶನ ನೀಡುವಂತೆ ಬೆಂಗಳೂರು ನಗರ, ಜಿಲ್ಲಾಧಿಕಾರಿ ಇವರು ಕೋರಿರುತ್ತಾರೆ.

ಮುಂದುವರೆದು, ಆರ್ಥಿಕ ಇಲಾಖೆಯು ಉಲ್ಲೇಖ-2ರ ಸುತ್ತೋಲೆಯಲ್ಲಿ ಈ ಕೆಳಕಂಡಂತೆ ಸೂಚಿಸಿರುತ್ತದೆ.

1. ಮುಂದುವರಿದ ಕಾರ್ಯಕ್ರಮ/ಯೋಜನೆಗಳಿಗೆ ಸಂಬಂಧಿಸಿದಂತೆ ಸರಕು ಮತ್ತು ಸೇವೆಗಳ ಸಂಗ್ರಹಣಗಳ ಸಂಬಂಧ ಹಣ ಬಿಡುಗಡೆ ಮಾಡಬಹುದಾಗಿದೆ.
2. ಪ್ರಾರಂಭವಾಗದಿರುವ ಕಾಮಗಾರಿಗಳ ಬಗ್ಗೆ ದಿನಾಂಕ: 22.05.2023 ರ ಸುತ್ತೋಲೆಯಲ್ಲಿನ ನಿರ್ದೇಶನಗಳು ಮುಂದುವರೆಯುತ್ತವೆ ಎಂದು ತಿಳಿಸಿರುತ್ತದೆ.

...2

ಆದ್ದರಿಂದ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನವನ್ನು ಮುಂದುವರೆದ ಕಾಮಗಾರಿಗಳಿಗೆ ಬಿಡುಗಡೆಗೊಳಿಸಲು ಸರ್ಕಾರವು ಅನುಮತಿ ನೀಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

[ಮಾನ್ಯ ಮುಖ್ಯಮಂತ್ರಿಗಳಿಂದ ಅನುಮೋದಿಸ್ಪಟ್ಟಿದೆ]

ತಮ್ಮ ವಿಶ್ವಾಸಿ,

(ಡಿ. ಚಂದ್ರಶೇಖರಯ್ಯ)
ನಿರ್ದೇಶಕರು, ಎಡಿಬಿ ವಿಭಾಗ,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಹಾಗೂ ಸಾಂಖ್ಯಿಕ ಇಲಾಖೆ.

**ಪ್ರತಿ:-**
ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 227 (192) ರ ಅನುಬಂಧ-2.**

**(ರೂ. ಲಕ್ಷಗಳಲ್ಲಿ)**

| ಕ್ರ ಸಂ | ಶಾಸಕರ ಹೆಸರು | ಕಾಮಗಾರಿ ವಿವರ | ಅಂದಾಜು ಮೊತ್ತ |
|---|---|---|---|
| 1 | ಬಿ.ಕೆ.ಹರಿಪ್ರಸಾದ್ | ನಿರ್ಗತಿಕ ಲೈಂಗಿಕ ವೃತ್ತಿ ನಿರತ ಮಹಿಳೆಯರ ಹಾಗೂ ಅನಾಥ ಆಶ್ರಯ ಮನೆ 2ನೇ ಮಹಡಿ ಕಟ್ಟಡದ ನಿರ್ಮಾಣ | 5.00 |
| 2 | ಕೇಶವ ಪ್ರಸಾದ್ ಎಸ್ | ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರ ಮಲ್ಲತ್ ಹಳ್ಳಿ, ಜ್ಞಾನ ಭಾರತಿ ಪೋಸ್ಟ್, ಬೆಂಗಳೂರು ಇಲ್ಲಿ ರಸ್ತೆ ನಿರ್ಮಾಣ ಹಾಗೂ ಬೀದಿದೀಪ ಒದಗಿಸಲು | 5.00 |
| 3 | ಕೇಶವ ಪ್ರಸಾದ್ ಎಸ್. | ಶ್ರೀ ಶಿವಲಿಂಗೇಶ್ವರ ಭಜನಾ ಮಂಡಳಿ ಬಜೆ ಎಸ್.ಸಿ. ಕಾಲೋನಿ, ಅಂಜಾರು ಗ್ರಾಮ, ಕಾಪು, ಉಡುಪಿ ಜಿಲ್ಲೆ ಇಲ್ಲಿ ಭಜನಾ ಮಂಡಳಿ ಕಟ್ಟಡ ನಿರ್ಮಾಣ | 5.00 |
| 4 | ಕೇಶವ ಪ್ರಸಾದ್ ಎಸ್. | ಬಿದರೆ ನೀರು ಬಳಕೆದಾರರ ಸಹಕಾರ ಸಂಘ ನಿಯಮಿತ, ಬಿದರೆ, ಚೇಳೂರು ಹೋಬಳಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ ಇಲ್ಲಿ ಸಂಘದ ಕಟ್ಟಡ ನಿರ್ಮಾಣ. | 5.00 |
| 5 | ಕೇಶವ ಪ್ರಸಾದ್ ಎಸ್. | ಕುರುಹೀನಶೆಟ್ಟಿ ಮಹಿಳಾ ಸಮಾಜ(ರಿ) ಹೊಸಹೊಳಲು ಕೆ.ಆರ್.ಪೇಟೆ ತಾಲ್ಲೂಕು, ಮಂಡ್ಯ ಜಿಲ್ಲೆ ಇಲ್ಲಿ ಸಮಾಜದ ಸಮುದಾಯ ಭವನ ನಿರ್ಮಾಣ | 10.00 |
| 6 | ಕೇಶವ ಪ್ರಸಾದ್ ಎಸ್ | Sri Pushpandaja Maharshi Gurupeetha Trust Trirumagondana Halli, Tapasihalli Gate, Antharahalli Post, Doddaballapur-561203 ಇಲ್ಲಿ ಮಕ್ಕಳ ವಿದ್ಯಾರ್ಥಿ ನಿಲಯ, ಪಾಕಶಾಲೆ, ಗ್ರಂಥಾಲಯ ನಿರ್ಮಾಣ. | 5.00 |
| 7 | ಅ ದೇವೇಗೌಡ | ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ಮಾಚೋಹಳ್ಳಿ ಗ್ರಾಮದ ಸರ್ವೆ ನಂಬರ್ 93/2ರ ಶ್ರೀಮತಿ, ತಿಮ್ಮಕ್ಕ ರವರ ಜಮೀನಿನ ರಾಜಕಾಲುವೆಗೆ ತಡೆಗೋಡೆ ನಿರ್ಮಾಣ | 5.00 |
| 8 | ಅ ದೇವೇಗೌಡ | ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ತಾಲ್ಲೂಕು, ಶಿವನಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಭೀಮಾಪುರ ಗ್ರಾಮದ ಮುಖ್ಯರಸ್ತೆಯಿಂದ ಬಸಪ್ಪನವರ ಮನೆಯವರೆಗೆ ಸಿ.ಸಿ.ರಸ್ತೆ ಕಾಮಗಾರಿ. | 5.00 |
| 9 | ಮುನಿರಾಜುಗೌಡ ಪಿ.ಎಂ. | ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು, ಅರೇಹಳ್ಳಿ ಹೋಬಳಿಯ ಮೈಕ್ರೋ ಟವರ್ ನಿಂದ ಅಂಜಿಹಳ್ಳಿ ಪರಿಶೀಷ್ಟ ಜಾತಿಯ ಕಾಲೋನಿಗೆ ಸಿ.ಸಿ.ರಸ್ತೆ ಕಾಮಗಾರಿ. | 5.00 |
| 10 | ಮುನಿರಾಜುಗೌಡ ಪಿ.ಎಂ. | ಬೀದರ್ ಜಿಲ್ಲೆ, ಹುಲಸೂರು ತಾಲ್ಲೂಕಿನ ಗೋರ್ಟಾ(ಬಿ) ಗ್ರಾಮದ ಶಾರದಾ ಹಿರಿಯ ಪ್ರಾಥಮಿಕ ಶಾಲೆ ಮತ್ತು ಜ್ಞಾನವರ್ದಕ ಪ್ರೌಢಶಾಲೆ ಇದರ ಪೀಠೋಪಕರಣ ಖರೀದಿಗಾಗಿ. | 5.00 |
| 11 | ಮುನಿರಾಜುಗೌಡ ಪಿ.ಎಂ | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕಿನ ಅನುದಾನಿತ ಖಾಸಗಿ ಹಿರಿಯ ಪ್ರಾಥಮಿಕ ಶಾಲೆ, ಸುಲ್ಕೇರಿ (ಶ್ರೀರಾಮ ಶಾಲೆ) ತರಗತಿ ಕೊಠಡಿಗಳ ನಿರ್ಮಾಣ. | 5.00 |
| 12 | ಮುನಿರಾಜುಗೌಡ ಪಿ.ಎಂ. | ಹಾವೇರಿ ತಾಲ್ಲೂಕಿನ ಕರ್ಜಗಿ ಗ್ರಾಮದಿಂದ ರೈಲ್ವೇ ನಿಲ್ದಾಣ ರಸ್ತೆಯ (ದೇವಗಿರಿ ರಸ್ತೆ) ಎಡ ಭಾಗದಲ್ಲಿರುವ ಸರ್ವೆ ನಂ.122-3ಅ/2ಬ ಹೊಲಕ್ಕೆ ಹೊಂದಿಕೊಂಡಿರುವ ರಸ್ತೆ ಕಾಮಗಾರಿ. | 2.00 |
| 13 | ಮುನಿರಾಜುಗೌಡ ಪಿ.ಎಂ | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕಿನ ಪಟ್ರಮೆ ಗ್ರಾಮದ ಶ್ರೀರಾಮ ಪ್ರೌಢಶಾಲೆ, ಪಟ್ರೂರು ಇಲ್ಲಿ ತರಗತಿ ಕೊಠಡಿಗಳ ನಿರ್ಮಾಣ. | 5.00 |